# ಮಂಗಳೂರು ವಿವಿಯಲ್ಲಿ ಚರ್ಚಾ ಸ್ಪರ್ಧೆ, ಭಾಷಣಾ ಸ್ಪರ್ಧೆ ಉದ್ಘಾಟನೆ

# ಜ್ಞಾನ ವೃದ್ಧಿಗೆ ಕಾರ್ಯಕ್ರಮ ಸಹಕಾರಿ: ಪ್ರೊ.ಧರ್ಮ

**ಕೊಣಾಜೆ:** ಮಂಗಳೂರು ವಿಶ್ವವಿದ್ಯಾನಿಲಯ ರಾಜ್ಯಶಾಸ್ತ್ರ ವಿಭಾಗ, ರಾಜ್ಯಶಾಸ್ತ್ರ ಸಂಘ ಮತ್ತು ರಾಜ್ಯಶಾಸ್ತ್ರ ಹಳೆ ವಿದ್ಯಾರ್ಥಿಗಳ ಸಂಘದ ವತಿಯಿಂದ ಪದವಿ ಮಟ್ಟದ ವಿದ್ಯಾರ್ಥಿಗಳಿಗೆ ಚರ್ಚಾ ಸ್ಪರ್ಧೆ ಮತ್ತು ಭಾಷಣಾ ಸ್ಪರ್ಧೆಯ ಉದ್ಘಾಟನಾ ಕಾರ್ಯಕ್ರಮ ಶುಕ್ರವಾರ ನಡೆಯಿತು.

ಉದ್ಘಾಟನೆ ನೇರವೇರಿಸಿದ ಕುಲಪತಿ ಪ್ರೊ.ಪಿ.ಎಲ್. ಧರ್ಮ, ಇಂತಹ ಕಾರ್ಯಕ್ರಮಗಳು ವಿ.ವಿ. ಮತ್ತು ಪದವಿ ಕಾಲೇಜುಗಳ ನಡುವೆ ಸಾಂಸ್ಕೃತಿಕ ಸಂಬಂಧಗಳನ್ನು ಬೆಳೆಸಲು ಮತ್ತು ಒಳ್ಳೆಯ ಆಲೋಚನೆಗಳನ್ನು ವ್ಯಕ್ತಪಡಿಸಲು ಮಾರ್ಗವಾಗಿದೆ ಚರ್ಚಾ ಸ್ಪರ್ಧೆ ಮತ್ತು ಭಾಷಣ ಸ್ಪರ್ಧೆಗಳು ವಿದ್ಯಾರ್ಥಿಗಳಲ್ಲಿ ಮಾತನಾಡುವ ಮತ್ತು ಸಂವಹನ ನಡೆಸುವ ಕಲೆಯನ್ನು ಕಲಿಸಿಕೊಡುವುದರ ಜೊತೆಗೆ ಜ್ಞಾನ ವೃದ್ಧಿಸುತ್ತದೆ ಎಂದರು.

ರಾಜ್ಯಶಾಸ್ತ್ರ ಹಳೆ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷರಾದ ಪ್ರೊ. ಝೇವಿಯರ್ ಡಿಸೋಜ ಮಾತನಾಡಿ, ವಿಶ್ವವಿದ್ಯಾನಿಲಯಗಳಲ್ಲಿ ಚರ್ಚಾ ಸ್ಪರ್ಧೆ ಮತ್ತು ಭಾಷಣ ಸ್ಪರ್ಧೆಗಳು ನಿರಂತರ ಆಯೋಜಿಸುವುದರ ಮೂಲಕ ವಿದ್ಯಾರ್ಥಿಗಳಲ್ಲಿ ಕಲಿಕೆಯಲ್ಲಿ ಆಸಕ್ತಿಯನ್ನು ತೊಡಗಿಸಿಕೊಳ್ಳಲು ಅವಕಾಶ ಕಲ್ಪಿಸಿಕೊಡಬೇಕೆಂದು ಹೇಳಿದರು.



> ## ವಿಷಯ ವಿನಿಮಯ
>
> **ಚರ್ಚೆಗಳು ನಿರಂತರವಾಗಿ ನೆಡೆದಾಗ ಉತ್ತಮ ಸಮಾಜ ನಿರ್ಮಾಣಕ್ಕೆ ಸಹಕಾರವಾಗುವುದರ ಜೊತೆಗೆ ವಿದ್ಯಾರ್ಥಿಗಳಲ್ಲಿ ವಿಷಯ ವಿನಿಮಯವಾಗುತ್ತದೆ**
>
> • ರಾಜು ಮೊಗವೀರ

ಮಂಗಳೂರು ವಿ.ವಿ. ಕುಲಸಚಿವರಾದ ಕೆ. ರಾಜು ಮೊಗವೀರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಧ್ಯಾಪಕರು ಮತ್ತು ಅಧ್ಯಕ್ಷರಾದ ಪ್ರೊ. ಜಯರಾಜ್ ಅಮೀನ್ ವಹಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಪ್ರಾಧ್ಯಾಪಕರಾದ ಪ್ರೊ. ಶಾನಿ, ಪ್ರೊ. ಲತಾ ಪಂಡಿತ್, ಪ್ರೊ. ದಯಾನಂದ ನಾಯ್ಕ್, ಡಾ. ರಾಜ್ ಪ್ರವೀಣ್ ಸಿ.ಎಂ., ಡಾ. ವೆಂಕಟೇಶ್ ಎಚ್.ಎಸ್., ಡಾ. ಶಾಮಿ, ಡಾ. ನಾಗರಾಜು ಮತ್ತು ವಿವಿಧ ಕಾಲೇಜುಗಳ ಪ್ರಾಧ್ಯಾಪಕರು, ವಿಭಾಗದ ಸಂಶೋಧನಾ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ವಿದ್ಯಾರ್ಥಿ ಲಿನ್ ವಂದಿಸಿದರು, ಚಿರಾಗ್ ಕಾರ್ಯಕ್ರಮ ನಿರೂಪಿಸಿದರು.